ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

# ಪತ್ರಿಕಾ ತುಣುಕುಗಳು

# PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE :

## ಮಹಾರಾಷ್ಟ್ರ ರಾಜ್ಯಪಾಲರ ಭಾಷಣದಲ್ಲೂ ಬೆಳಗಾವಿ ಗಡಿ ಕ್ಯಾತೆ

ಮುಂಬೈ: ಅಧಿಕಾರಕ್ಕೆ ಬಂದಾಗಿನಿಂದಲೂ ಕರ್ನಾಟಕದ ಜೊತೆಗಿನ ಗಡಿ ವಿವಾದವನ್ನು ಕೆದಕುತ್ತಲೇ ಇರುವ ಶಿವಸೇನೆ ನೇತೃತ್ವದ ಮಹಾ ಅಘಾಡಿ ಸರ್ಕಾರ ಇದೀಗ, ರಾಜ್ಯಪಾಲರ ಭಾಷಣದಲ್ಲೂ ಆ ವಿಷಯ ತೂರಿಸುವ ಮೂಲಕ, ಮುಂದಿನ ದಿನಗಳಲ್ಲಿ ವಿವಾದವನ್ನು ಇನ್ನಷ್ಟು ಬೆಳೆಸುವ ಸೂಚನೆ ನೀಡಿದೆ. ಮಹಾರಾಷ್ಟ್ರ ವಿಧಾನಸಭೆಯ ಬಜೆಟ್ ಅಧಿವೇಶನಕ್ಕೆ ಸೋಮವಾರ ಚಾಲನೆ ಸಿಕ್ಕಿದ್ದು, ರಾಜ್ಯಪಾಲ ಭಗತ್‌ಸಿಂಗ್ ಕೋಶಿಯಾರಿ ಅವರು ಜಂಟಿ ಅಧಿವೇಶನ ಉದ್ದೇಶಿಸಿ ಮಾತನಾಡಿದರು. ಈ ವೇಳೆ 'ಕರ್ನಾಟಕದ ಜೊತೆಗಿನ ಗಡಿ ವಿವಾದಕ್ಕೆ ಸಂಬಂಧಿಸಿದಂತೆ ದಾಖಲಿಸಿರುವ ಮೂಲ ಅರ್ಜಿಯ ವಿಷಯದಲ್ಲಿ ರಾಜ್ಯ ಸರ್ಕಾರ ಸುಪ್ರೀಂಕೋರ್ಟ್‌ನಲ್ಲಿ ಪ್ರಬಲ ವಾದ ಮಂಡಿಸಿದೆ. ಮುಂದೆಯೂ ಅದನ್ನು ಮುಂದುವರಿಸಲಿದೆ. ಜೊತೆಗೆ ರಾಜ್ಯದ ಗಡಿಗಳಲ್ಲಿ ವಾಸಿಸುವ ಮರಾಠಿ ನಾಗರಿಕರಿಗೆ ನ್ಯಾಯ ಒದಗಿಸಲು ನನ್ನ ಸರ್ಕಾರ ಬದ್ಧವಾಗಿದೆ' ಎನ್ನುವ ಮೂಲಕ ರಾಜ್ಯ ಸರ್ಕಾರದ ಇರಾದೆಯನ್ನು ವ್ಯಕ್ತಪಡಿಸಿದರು.